# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 21, ಹೆಬ್ಬಾಳ, ಬೆಂಗಳೂರು.**

**ಸಂಖ್ಯೆ: ಸ.ಅ/ವಾ-21/ಪಿ.ಆರ್/08/2020-21** **ದಿನಾಂಕ:19-01-2021.**

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/20-21 ದಿನಾಂಕ: 21-09-2020. ರವರ ಆದೇಶದಂತೆ ದಿನಾಂಕ:16-01-2021 ರಂದು 12.00 ಗಂಟೆಗೆ ವಾರ್ಡ್ ನಂ:21 ಹೆಬ್ಬಾಳ ವಾರ್ಡ್ ವ್ಯಾಪ್ತಿಯಲ್ಲಿನ ಕ್ಷೇಮಾಭಿವೃದ್ಧಿ ಸಂಘ (ರಿ) ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

### "ಸಭೆಗೆ ಹಾಜರಾಗಿದ್ದವರ ವಿವರಗಳು"

| ಕ್ರಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 01 | ಎಂ.ವೆಂಕಟಾಚಲಪತಿ ಜಂಟಿ ಆಯುಕ್ತರು (ಕಂದಾಯ) | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 02 | ಮುಕೇಶ್ ಎಸ್ ಬಿರಾದಾರ್ (ಎ.ಇ) | ಸದಸ್ಯ ಕಾರ್ಯದರ್ಶಿ ವಾರ್ಡ್ ನಂ: 21 |
| 03 | ಮಂಜುನಾಥ್ | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾನಿ) |
| 04 | ರಾಧ. ಈ | ಕಿರಿಯ ಅಭಿಯಂತರರು, ಬೆಸ್ಕಾಂ |
| 05 | ಲಯುರ್ ಆರ್ | ಬಿ.ಡಬ್ಲ್ಯೂ.ಎಸ್.ಎಸ್.ಬಿ ಸದಸ್ಯರು |
| 06 | ನಟರಾಜ | ಕಂದಾಯ ಮೌಲ್ಯಮಾಪಕರು, ಸದಸ್ಯರು |
| 07 | ರಾಮಣ್ಣ. ಎಸ್ | ತೆರಿಗೆ ನೀರಿಕ್ಷಕರು ವಾರ್ಡ್-21 |
| 08 | ಹರೀಶ್ ಕುಮಾರ್ | ಕೆಲಸ ಪರಿವೀಕ್ಷಕರು, ಸದಸ್ಯರು |
| 09 | ಎನ್. ಪ್ರಕಾಶ್ | ಸ್ಥಳೀಯ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘ, |
| 10 | ಕ್ಯಾಪ್ಟನ್ ರಾಮಚಂದ್ರ | ಸ್ಥಳೀಯ ನಿವಾಸಿಗಳ |
| 11 | ರವಿ ಬಿಕ್ಕಲ್ | ಸ್ಥಳೀಯ ನಿವಾಸಿಗಳ |
| 12 | ಆನಂದ್ ಕುಮಾರ್ | ಕಿರಿಯ ಅಭಿಯಂತರರು |
| 13 | ಅಶೋಕ | ಮುಖ್ಯ ಮಾರ್ಷಲ್ |

ವಾರ್ಡ್ ಸಮಿತಿಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಯಾದ ಶ್ರೀ.ಎಂ.ವೆಂಕಟಾಚಪತಿ ಮತ್ತು ಕಾರ್ಯದರ್ಶಿಗಳಾದ ಶ್ರೀ ಮುಕೇಶ್ ಎಸ್. ಬಿರಾದರ್ ರವರು ಸಭೆಗೆ ಆಗಮಿಸಿದ ಎಲ್ಲರಿಗೂ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು. ಹಾಗೂ ಅಧ್ಯಕ್ಷರಿಗೆ ವಾರ್ಡ್ ಸಭೆ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ವಿಸ್ತಾರವಾಗಿ ಪ್ರಸ್ತಾಪಿಸಲು ಕೋರಲಾಯಿತು.

ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ವಾರ್ಡ್ ನಂ:21 ರವರು ಸ್ವಯಂ ಪರಿಚಯ ಮಾಡಿಕೊಂಡು ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆ, ರಸ್ತೆ ಗುಂಡಿ ಮುಚ್ಚುವ ಬಗ್ಗೆ, ಬೀದಿ ದೀಪಗಳ ನಿರ್ವಹಣೆ ಬಗ್ಗೆ ಸಾರ್ವಜನಿಕರುಗಳ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸಾರ್ವಜನಿಕರಿಗೆ ತಿಳಿಯಪಡಿಸಿದರು.

- ದಿನಾಂಕ : 16-01-2021 ರಂದು ನಡೆದ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ ಬಾಕಿ ಇರುವ ಕುಂದು ಕೊರತೆಗಳನ್ನು ಪೂರೈಸಲು ಸಭೆಯಲ್ಲಿ ತಿಳಿಸಿರುತ್ತಾರೆ.

- **ಘನತ್ಯಾಜ್ಯ ನಿರ್ವಹಣೆ ಕೋಶದ ಅಧಿಕಾರಿಗಳಿಗೆ:**

1. ವಾರ್ಡ್ ವ್ಯಾಪ್ತಿಯಲ್ಲಿ ಪ್ರದೇಶಗಳಲ್ಲಿ ಶೇಖರಣೆಗೊಳ್ಳುವ ಮರದ ಕೊಂಬೆಗಳನ್ನು ತೆರವುಗೊಳಿಸಲು ಪ್ರತಿ ದಿನ ಟ್ರಾಕ್ಟರ್ ಕಳುಹಿಸುವುದಾಗಿಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ ರವರು ವಾರ್ಡ್ ಕಮಿಟಿ ಸಭೆಯಲ್ಲಿ ತಿಳಿಸಿರುತ್ತಾರೆ.
2. ವಾರ್ಡ್‌ನ ಬ್ಲಾಕ್‌ಸ್ಪಾಟ್‌ಗಳಲ್ಲು ಸ್ವಚ್ಛಗೊಳಿಸಲು ಸಂಬಂಧಪಟ್ಟ ಘನತ್ಯಾಜ್ಯ ನಿರ್ವಹಣ ಸಹಾಯಕ ಕಾರ್ಯಪಾಲಕ ಅಭಿಯಂತರರು/ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಅಗತ್ಯಾ ಕ್ರಮ ವಹಿಸಲು ಸೂಚಿಸಲಾಯಿತು.

3. ವಾರ್ಡ್ ವ್ಯಾಪ್ತಿಯಲ್ಲಿ ಮನೆ ಮನೆಯಿಂದ ಕಸ ಸಂಗ್ರಹಣೆ ಮತ್ತು ಸಾಗಣಿಕೆ ಮಾಡುತ್ತಿರುವ ಆಟೋ ಟಿಪ್ಪರ್ ವಾಹನಗಳಿಗೆ ಮೈಕ್ ಅಳವಡಿಸುವಂತೆ ಸಂಬಂಧಪಟ್ಟ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.

- **ಬೆಸ್ಕಾಂ ವಿಭಾಗ ರವರಿಗೆ:**

1. ವಾರ್ಡ್ ಪ್ರದೇಶಗಳಲ್ಲಿ ವಿದ್ಯುತ್ ಕಂಬಗಳ ಮೇಲೆ ಚಾಚಿಕೊಂಡಿರುವ ಮರದ ರೆಂಬೆಗಳನ್ನು ತೆರವುಗೊಳಿಸಲು ಅಗತ್ಯ ಕ್ರಮ ವಹಿಸುವಂತೆ ಬೆಸ್ಕಾಂ ಅಧಿಕಾರಿಗಳಿಗೆ ಸೂಚಿಸಲಾಯಿತು.

- **ಬಿಡಬ್ಲ್ಯೂಎಸ್ಎಸ್ಬಿ ರವರಿಗೆ:**

1. ವಾರ್ಡ್ ವ್ಯಾಪ್ತಿಯಲ್ಲಿ ವೇಳ ಪಟ್ಟಿಯಂತೆ ಸರಿಯಾದ ಸಮಯಕ್ಕೆ ಕುಡಿಯುವ ನೀರಿನ ವ್ಯವಸ್ಥೆ ಮಾಡುವಂತೆ ಸೂಚಿಸಲಾಯಿತು.

- **ಕಾಮಗಾರಿ ಇಲಾಖೆಗೆ.**

1. ಆನಂದನಗರ 1ನೇ ಮುಖ್ಯ ರಸ್ತೆಯಲ್ಲಿ ಪಾದಚಾರಿಗಳ ಮಾರ್ಗವನ್ನು ದುರಸ್ಥಿ ಪಡಿಸುವಂತೆ ವಾರ್ಡ್ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.
2. ವಾರ್ಡ್ ವ್ಯಾಪ್ತಿಯಲ್ಲಿನ ಪಾಟ್‌ಹೋಲ್ಸ್ ಬ್ಲಾಕ್ ಟಾಪ್ ಮಾಡಿಸುವಂತೆ ಕಾಮಗಾರಿ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಲಾಯಿತು.
3. ಸಿಸಿಟಿವಿ ಕ್ಯಾಮೆರಗಳನ್ನು ಎಜಿಎಸ್ ಕಾಲೋನಿ ಆನಂದನಗರ 1ನೇ ಬ್ಲಾಕ್ ನಲ್ಲಿನ ದುರಸ್ಥಿಯಲ್ಲಿರುವುದನ್ನು ಸರಿಪಡಿಸುವ ಬಗ್ಗೆ ಕಾಮಗಾರಿ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಲಾಯಿತು.

- ವಿದ್ಯುತ್ ವಿಭಾಗ.

1. ವಾರ್ಡ್ ವ್ಯಾಪ್ತಿಯಲ್ಲಿನ ಬೀದಿ ದೀಪಗಳು ದುರಸ್ಥಿಯಲ್ಲಿರುವುದನ್ನು ಈ ಕೂಡಲೇ ಸರಿಪಡಿಸುವಂತೆ ಸೂಚಿಸಲಾಯಿತು.

ಮೇಲ್ಕಂಡ ಸಮಸ್ಯೆಗಳು ಬಗ್ಗೆ ಸುದೀರ್ಘವಾಗಿ ಚರ್ಚಿಸಿ, ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳುವಂತೆ ಸೂಚಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ: 21, ಹೆಬ್ಬಾಳ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ: 21, ಹೆಬ್ಬಾಳ

ಪ್ರತಿಯನ್ನು:-

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ/ಅಪರ ಆಯುಕ್ತರು(ಪೂರ್ವ)ಬಿಬಿಎಂಪಿರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
3. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
4. ಮಾನ್ಯ ಜಂಟಿ ಆಯುಕ್ತರು (ಪೂರ್ವ) ಬಿ.ಬಿ.ಎಂ.ಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
5. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
6. ವಾರ್ಡ್ ಸಮಿತಿಯ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್ಬಿ, ರವರ ಅವಗಾಹನೆಗಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪುಲಿಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
9. ಸಹಾಯಕ ಅಭಿಯಂತರರು(ವಿದ್ಯುತ್/ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
10. ಕಛೇರಿ ಕಡತಕ್ಕೆ.